# Akashvani : Bangalore
# Regional Bulletin In Kannada
# 23.02.2026 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.02.2026 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಚಿಕ್ಕಬಳ್ಳಾಪುರ ಸಮೀಪ ಕೆಪಿಸಿಸಿ ವತಿಯಿಂದ ಇಂದು ನರೇಗಾ ಬಚಾವೋ ಆಂದೋಲನಾ; ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ**

**೨. ನೇಕಾರರ ಸಮಸ್ಯೆಗಳನ್ನು ಬಗೆಹರಿಸಲು ಕೇಂದ್ರ ಸಚಿವರೊಂದಿಗೆ ಸಮಾಲೋಚನೆಗೆ ಚಿಂತನೆ- ಸಂಸದ ಡಾ.ಕೆ.ಸುಧಾಕರ್**

**೩. ಶಾಸಕ ಚಂದ್ರು ಲಮಾಣಿ ಬಂಧನ; ಕಾಂಗ್ರೆಸ್ ಸರ್ಕಾರದಿಂದ ದ್ವೇಷದ ರಾಜಕಾರಣ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ**

**೪. ಚಿಕ್ಕಮಗಳೂರು ಕಾಡಾನೆ ದಾಳಿ; ಪ್ರತಿಭಟನಾಕಾರರ ಮೇಲೆ ಲಾಠಿ ಚಾರ್ಜ್ ಖಂಡಿಸಿ ಇಂದು ಮೂರು ತಾಲೂಕು ಬಂದ್‌ಗೆ ಕರೆ**

**<><*<><>*><>**

ಗ್ರಾಮೀಣ ಭಾಗದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿರುವ ಮನ್ರೇಗಾ ಯೋಜನೆಯನ್ನು ಪ್ರಸ್ತುತ ಇರುವ ಸ್ವರೂಪದಲ್ಲಿಯೇ ಮುಂದುವರಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಆಗ್ರಹಿಸಿದ್ದಾರೆ. ಚಿಕ್ಕಬಳ್ಳಾಪುರ ನಗರ ಹೊರವಲಯದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ-ಕೆಪಿಸಿಸಿ ಆಯೋಜಿಸಿದ್ದ ನರೇಗಾ ಬಚಾವೋ ಆಂದೋಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಹಿಂದೆ ಯುಪಿಎ ಸರ್ಕಾರ ಗ್ರಾಮೀಣಾಭಿವೃದ್ಧಿಯ ನಿಟ್ಟಿನಲ್ಲಿ ಮನ್ರೇಗಾ ಯೋಜನೆಯನ್ನು ಜಾರಿ ಮಾಡಿತ್ತು ಎಂದರು. ಪ್ರತಿ ಪಂಚಾಯಿತಿ ವ್ಯಾಪ್ತಿಯಲ್ಲಿ ಮನ್ರೇಗಾ ಯೋಜನೆಯಡಿ ವರ್ಷಕ್ಕೆ ೫೦ ಲಕ್ಷ ರೂಪಾಯಿಗಳಿಂದ ೨ ಕೋಟಿ

ರೂಪಾಯಿಗಳವರೆಗೆ ವೆಚ್ಚ ಮಾಡಿ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲು ಅವಕಾಶವಿತ್ತು. ಮನ್ರೇಗಾ ಅಡಿಯಲ್ಲಿ ಸರ್ಕಾರಿ ಶಾಲಾ ಕಾಂಪೌಂಡ್, ಕೆರೆ ಕಾಲುವೆ ಅಭಿವೃದ್ಧಿ, ಆಟದ ಮೈದಾನ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿತ್ತು. ಈಗ ಕೇಂದ್ರ ಸರ್ಕಾರ ಮನ್ರೇಗಾ ಯೋಜನೆಯನ್ನು ಪರಿಷ್ಕರಿಸುವ ನೆಪದಲ್ಲಿ ಕೋಟ್ಯಂತರ ಬಡ ಜನರ ಹಿತಾಸಕ್ತಿಗೆ ಧಕ್ಕೆ ಉಂಟುಮಾಡುತ್ತಿದೆ ಎಂದು ದೂರಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ( ಸೆಕೆಂಡ್ಸ್)**

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ವಕ್ತಾರ ರಣದೀಪ್ ಸಿಂಗ್ ಸುರ್ಜೇವಾಲ, ಸಚಿವರಾದ ಕೆ.ಹೆಚ್.ಮುನಿಯಪ್ಪ, ಡಾ.ಎಂ.ಸಿ.ಸುಧಾಕರ್. ಬೈರತಿ ಸುರೇಶ್ ಹಾಗೂ ಕಾಂಗ್ರೆಸ್ ಶಾಸಕರು, ಮುಖಂಡರು ಉಪಸ್ಥಿತರಿದ್ದಾರೆ.

**<><*<><>*><>**

ಸಂಕಷ್ಟದಲ್ಲಿರುವ ನೇಕಾರರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ನೇಕಾರರ ಮುಖಂಡರ ನಿಯೋಗದೊಂದಿಗೆ ದೆಹಲಿಗೆ ತೆರಳಿ ಸಂಬಂಧಪಟ್ಟ ಸಚಿವರಿಗೆ ಹಾಗೂ ಇಲಾಖೆಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆಯುತ್ತಿರುವ ದೊಡ್ಡಬಳ್ಳಾಪುರ ಸೀರೆ ಸಂತೆ, ಸೀರೆಗಳ ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಇಂದು ಭೇಟಿ ನೀಡಿದರು. ಬಳಿಕ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರ 'ವೋಕಲ್ ಫಾರ್ ಲೋಕಲ್' ಸ್ವದೇಶಿ ಪರಿಕಲ್ಪನೆಗೆ ಪೂರಕವಾಗಿ ಸ್ಥಳೀಯ ಉದ್ಯಮಗಳಿಗೆ ಉತ್ತೇಜನ ನೀಡಬೇಕಿದೆ ಎಂದರು. ಇಂದು ನೇಕಾರರು, ಮಾರುಕಟ್ಟೆ ಸಮಸ್ಯೆಗಳು ಸೇರಿದಂತೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ಕುರಿತು, ತಮ್ಮ ಗಮನಕ್ಕೆ ಬಂದಿದ್ದು, ಈ

ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

**<><*<><>*><>**

ಶಿರಹಟ್ಟಿ ಕ್ಷೇತ್ರದ ಬಿಜೆಪಿ ಶಾಸಕ ಚಂದ್ರು ಲಮಾಣಿ ಅವರ ಬಂಧನವನ್ನು ಖಂಡಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಬಂಜಾರ ಸಮುದಾಯವನ್ನು ಗುರಿಯಾಗಿಸಿಕೊಂಡು ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣದ ಭಾಗವಾಗಿ ಸಮುದಾಯದ ಮುಖಂಡರ ಮೇಲೆ ಕ್ರಮ ಕೈಗೊಳ್ಳುತ್ತಿದೆ. ಶಾಸಕ ಬಂಧನ ಪ್ರಕರಣವನ್ನು ಪಕ್ಷ ಕಾನೂನು ಬದ್ಧವಾಗಿ ಎದುರಿಸಲಿದೆ. ಪ್ರಕರಣದ ಸತ್ಯಾಸತ್ಯತೆ ಹೊರಬರಬೇಕಿದೆ ಹಾಗೂ ಈಗಾಗಲೇ ಹೊರಬಿದ್ದಿರುವ ಆಡಿಯೋ ತುಣುಕುಗಳನ್ನು ಪರಿಶೀಲಿಸಬೇಕಿದೆ ಎಂದು ತಿಳಿಸಿದರು. ಮಾರ್ಚ್ ಮೊದಲ ವಾರದಲ್ಲಿ ನಡೆಯಲಿರುವ ಬಜೆಟ್ ಅಧಿವೇಶನದ ಕುರಿತು ಪ್ರಸ್ತಾಪಿಸಿದ ಅವರು, ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಅನುಸರಿಸಬೇಕಾದ ಕಾರ್ಯತಂತ್ರಗಳ ಬಗ್ಗೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹಾಗೂ ಹಿರಿಯ ನಾಯಕರೊಂದಿಗೆ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**<><*<><>*><>**

ಕೋಲಾರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೈಲಾರಪ್ಪ ಶ್ರೀನಿವಾಸಪುರ ಪಟ್ಟಣದ ಮೌಲಾನಾ ಆಜಾದ್ ಪಬ್ಲಿಕ್ ಶಾಲೆಗೆ ಭೇಟಿ ನೀಡಿ ಶಾಲೆಯ ಶೈಕ್ಷಣಿಕ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು. ಎಸ್ಎಸ್ಎಲ್ಸಿ ಪರೀಕ್ಷೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯನ್ನು ಅವಲೋಕಿಸಿದರು. ಈ ವೇಳೆ, ಸರ್ಕಾರದಿಂದ ನೂತನವಾಗಿ ಮಂಜೂರಾದ ಸ್ಮಾರ್ಟ್ ಕ್ಲಾಸ್ ಯೋಜನೆಯಡಿ ಅಳವಡಿಸಲಾಗಿರುವ ಡಿಜಿಟಲ್ ಬೋರ್ಡ್‌ಗೆ ಸುಮಾರು ಎರಡೂವರೆ ತಿಂಗಳ ಪ್ರಯೋಗಾತ್ಮಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಿಜಿಟಲ್ ತಂತ್ರಜ್ಞಾನಗಳ ಬಳಕೆಯಿಂದ ಬೋಧನೆ ಇನ್ನಷ್ಟು ಪರಿಣಾಮಕಾರಿಯಾಗಲಿದೆ. ೨೦೨೪-೨೭ನೇ ಶೈಕ್ಷಣಿಕ ವರ್ಷದಿಂದ ಸರ್ಕಾರದಿಂದ ಉಚಿತವಾಗಿ ವಿಜ್ಞಾನ ವಿಭಾಗದ ಪಿಸಿಎಂಬಿ ಪ್ರಥಮ ಪಿಯುಸಿ ತರಗತಿಗಳನ್ನು ಆರಂಭಿಸಲಾಗುವುದು. ನೀಟ್, ಕೆಸಿಇಟಿ ಹಾಗೂ ಜೆಇಇ ಸೇರಿದಂತೆ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಯನ್ನು ಪ್ರಥಮ ಪಿಯುಸಿಯಿಂದಲೇ ಪ್ರಾರಂಭಿಸಲಾಗುತ್ತಿದ್ದು, ದಾಖಲಾತಿಗಳಿಗೆ ಶೀಘ್ರದಲ್ಲೇ ಅರ್ಜಿ ಆಹ್ವಾನಿಸಲಾಗುವುದು ಎಂದು ಹೇಳಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಹುಣಸೇಹಳ್ಳಿ ಪುರ ಗ್ರಾಮದಲ್ಲಿ ಕಾಡಾನೆ ದಾಳಿಯಿಂದ ಮಹಿಳೆ ಸಾವು ಹಾಗೂ ಘಟನೆ ಖಂಡಿಸಿ ಪ್ರತಿಭಟನೆ ನಡೆಸುತ್ತಿದವರ ಮೇಲೆ ನಡೆದ ಲಾಠಿ ಚಾರ್ಜ್ ಖಂಡಿಸಿ ಇಂದು ಮೂರು ತಾಲೂಕುಗಳ ಬಂದ್‌ಗೆ ವಿವಿಧ ಸಂಘಟನೆಗಳು ಕರೆ ನೀಡಿವೆ. ಶೃಂಗೇರಿ ವಿಧಾನಸಭಾ ಕ್ಷೇತ್ರದ ಕೊಪ್ಪ, ಎನ್.ಆರ್.ಪುರ, ಶೃಂಗೇರಿ ತಾಲೂಕು ಬಂದ್‌ಗೆ ಕರೆ ನೀಡಿದ್ದು, ಮುಂಜಾನೆಯಿಂದಲ್ಲೆ ಈ ೩ ತಾಲೂಕಿನಲ್ಲಿ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಲಾಗಿದೆ. ಮುಂಜಾಗ್ರತ ಕ್ರಮವಾಗಿ ಹಲವೆಡೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

<><*<><>*><>

ಧಾರವಾಡ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಧಾರವಾಡ ತಾಲೂಕ ೧೨ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಇದೇ ೨೪ ರಂದು ಆಲೂರು ವೆಂಕಟರಾವ್ ಸಾಂಸ್ಕೃತಿಕ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಧಾರವಾಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಲಿಂಗರಾಜ ಅಂಗಡಿ ಹೇಳಿದ್ದಾರೆ. ಧಾರವಾಡದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮ್ಮೇಳನದ ಸರ್ವಾಧ್ಯಕ್ಷ ಚಂದ್ರಶೇಖರ ರೊಟ್ಟಿಗವಾಡ ಅವರ ಮೆರವಣಿಗೆಗೆ ಅಂಜುಮನ್ ಸಂಸ್ಥೆಯ ಅಧ್ಯಕ್ಷ ಇಸ್ಮಾಯಿಲ್ ತಮಟಗಾರ ಚಾಲನೆ ನೀಡಲಿದ್ದಾರೆ. ಅಪರ ಜಿಲ್ಲಾಧಿಕಾರಿ ಗೀತಾ.ಸಿ.ಡಿ ಧ್ವಜಾರೋಹಣ ನೆರವೇರಿಸಲಿದ್ದಾರೆ. ಹಿರಿಯ ಸಾಹಿತಿಗಳಾದ ಶಾಂತಿನಾಥ ದಿಬ್ಬದ

ಸಮಾರಂಭ ಉದ್ಘಾಟಿಸಲಿದ್ದಾರೆ. ಸಮ್ಮೇಳನದಲ್ಲಿ ಸಾಹಿತ್ಯ ಮತ್ತು ಆರೋಗ್ಯ ಗೋಷ್ಠಿ ನಡೆಯಲಿದೆ. ಸಾಹಿತ್ಯದಲ್ಲಿ ಜೀವನದ ಮೌಲ್ಯ ವಿಷಯದ ಕುರಿತು ಅಂಜುಮನ್ ಪದವಿ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ರುದ್ರೇಶ್ ಮೇಟಿ ಉಪನ್ಯಾಸ ನೀಡಲಿದ್ದಾರೆ. ದೈನಂದಿನ ಜೀವನದಲ್ಲಿ ಆರೋಗ್ಯ ರಕ್ಷಣೆ ವಿಷಯದ ಕುರಿತು ಗೀತಾ ಉತ್ತೂರ ಅವರು ಉಪನ್ಯಾಸ ನೀಡಲಿದ್ದಾರೆ. ನಂತರ ಸರ್ವಾಧ್ಯಕ್ಷರೊಂದಿಗೆ ಸಂವಾದ ನಡೆಯಲಿದೆ. ಸಮಾರೋಪ ಸಮಾರಂಭದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ, ನ್ಯಾಯಮೂರ್ತಿಗಳಾದ ವಿ. ಶ್ರೀಶಾನಂದ ಭಾಗವಹಿಸಲಿದ್ದಾರೆ ಎಂದು ಲಿಂಗರಾಜ ಅಂಗಡಿ ಹೇಳಿದ್ದಾರೆ.

**ಧ್ವನಿ: ಲಿಂಗರಾಜ ಅಂಗಡಿ ( ೪೦ ಸೆಕೆಂಡ್ಸ್)**

**<><*<><>*><>**

ಬಳ್ಳಾರಿ ಮಹಾ ನಗರ ಪಾಲಿಕೆಯ ೨೦೨೬-೨೭ ನೇ ಸಾಲಿನ ಆಯವ್ಯಯ ಮಂಡಿಸಲಾಗಿದೆ. ಮೇಯರ್ ಪಿ.ಗಾದೆಪ್ಪ ಅಧ್ಯಕ್ಷತೆಯಲ್ಲಿ ಇಂದು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಬಜೆಟ್ ಮಂಡನೆ ಸಭೆಯಲ್ಲಿ ಹಣಕಾಸು ಸ್ಥಾಯಿ ಸಮಿತಿ ಅಧ್ಯಕ್ಷ ವಿ.ಕುಬೇರ ಆಯವ್ಯಯವನ್ನು ಮಂಡಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**